ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ರೈತರ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ಬಗ್ಗೆ

ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

855 (845) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರೈತರು ಅವರ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆಯಲು ಇರುವ ಮಾನದಂಡಗಳೇನು ; ಇದನ್ನು ಪಡೆಯಲು ಯಾವ ಯಾವ ದಾಖಲೆಗಳನ್ನು ಸಲ್ಲಿಸಬೇಕು ;

(ಆ) ಕೃಷಿ ಆದಾಯ ರೂ. 8.00 ಲಕ್ಷಗಳ ಮೇಲ್ಪಟ್ಟು ಇರುವ ರೈತರಿಗೆ ಜಾತಿ ಪ್ರಮಾಣ ಪತ್ರಗಳನ್ನು ವಿತರಿಸುವುದಿಲ್ಲವೇಕೆ ; (ಕಾರಣಗಳೊಂದಿಗೆ ಮಾಹಿತಿ ನೀಡುವುದು)

(ಇ) ಹಿಂದುಳಿದ ವರ್ಗಗಳ ಪ್ರವರ್ಗ - 2ಎ, 2ಬಿ, 3ಎ, 3ಬಿ ಗಳ ಪ್ರವರ್ಗಗಳಿಗೆ ಸೇರಿದ ಜಾತಿಯವರ ವಾರ್ಷಿಕ ಕೃಷಿ ಆದಾಯ ರೂ. 8.00 ಲಕ್ಷ ಮೇಲ್ಪಟ್ಟ ರೈತರು ಜಾತಿ ಪ್ರಮಾಣ ಪತ್ರ ಪಡೆಯಲು ಇರುವ ಮಾನದಂಡವೇನು ?